# ಕರ್ನಾಟಕವಿಧಾನ ಪರಿಷತ್ತು

| | |
|---|---|
| ಚುಕ್ಕೆಗುರುತಿಲ್ಲದ ಪ್ರಶ್ನೆಸಂಖ್ಯೆ | **78** |
| ಮಾನ್ಯ ಸದಸ್ಯರ ಹೆಸರು | ಶ್ರೀ ಎನ್. ರವಿಕುಮಾರ್ |
| ಉತ್ತರಿಸಬೇಕಾದ ದಿನಾಂಕ | 11.08.2025 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಪ್ರಶ್ನೆ ಸಂಖ್ಯೆ | ವಿಷಯ | ಕ್ರಮ |
|---|---|---|
| (ಅ) | ರಾಜ್ಯದಲ್ಲಿ ಮನೆಬಾಗಿಲಿಗೆ ಸೇವೆ ಹಾಗೂ ಉಚಿತ ಔಷಧ ಒದಗಿಸುವ 'ಗೃಹ ಆರೋಗ್ಯ' ಯೋಜನೆ ಯಾವ ವರ್ಷ ಪ್ರಾರಂಭ ಮಾಡಲಾಗಿದೆ; ಈ ಯೋಜನೆಯ ಉದ್ದೇಶವೇನು; ಇದರ ಅಡಿಯಲ್ಲಿ ಬರುವ ಸೇವೆ ಮತ್ತು ಸೌಲಭ್ಯಗಳು ಯಾವುವು; (ವಿವರ ನೀಡುವುದು) | ರಾಜ್ಯದಲ್ಲಿ ಮನೆಬಾಗಿಲಿಗೆ ಸೇವೆ ಹಾಗೂ ಉಚಿತ ಔಷಧ ಒದಗಿಸುವ 'ಗೃಹಆರೋಗ್ಯ'ಯೋಜನೆಯನ್ನು 2024-25ನೇ ಸಾಲಿನಲ್ಲಿ ದಿನಾಂಕ: 24/10/2024 ರಂದು ಪ್ರಾರಂಭಿಸಲಾಗಿರುತ್ತದೆ.<br><br>ಗೃಹ ಆರೋಗ್ಯ ಯೋಜನೆಯ ಉದ್ದೇಶಗಳು;-<br><br>• ಅಸಾಂಕ್ರಾಮಿಕ ರೋಗಗಳನ್ನು ಆರಂಭಿಕ ಹಂತದಲ್ಲಿ ಪತ್ತೆಹಚ್ಚಿ ಮತ್ತು ಜಾಗೃತಿ ಹೆಚ್ಚಿಸುವುದು.<br>• ಸಕಾಲದಲ್ಲಿ ಆರೋಗ್ಯ ತಪಾಸಣೆ ಮತ್ತು ನಿರ್ವಹಣೆಗಾಗಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು.<br>• ವಿಕೇಂದ್ರೀಕೃತ ಆರೋಗ್ಯ ಸೇವೆಗಳ ಮೂಲಕ ನಿರಂತರ ಆರೈಕೆಯನ್ನು ಖಚಿತಪಡಿಸುವುದು.<br><br>ಗೃಹ ಆರೋಗ್ಯ ಯೋಜನೆಯಡಿಯಲ್ಲಿ ಒಟ್ಟು 14 ಅಸಾಂಕ್ರಾಮಿಕ ರೋಗಗಳ [ಮಧುಮೇಹ, ಅಧಿಕ ರಕ್ತದೊತ್ತಡ, ಬಾಯಿಕ್ಯಾನ್ಸರ್, ಸ್ತನಕ್ಯಾನ್ಸರ್, ಗರ್ಭಕಂಠದ ಕ್ಯಾನ್ಸರ್, ಡಯಾಬೆಟಿಕ್ ಫೂಟ್ ಮತ್ತು ರೆಟಿನೋಪತಿ, ಮಾನಸಿಕ ಆರೋಗ್ಯ ಅಸ್ವಸ್ಥತೆಗಳು, ನರವೈಜ್ಞಾನಿಕ ಅಸ್ವಸ್ಥತೆಗಳು, ನಿದ್ರೆಯಲ್ಲಿ ಉಸಿರುಗಟ್ಟುವಿಕೆ, ದೀರ್ಘಕಾಲದ ಮೂತ್ರಪಿಂಡದ ಕಾಯಿಲೆ, ದೀರ್ಘಕಾಲದ ಪ್ರತಿರೋಧಕ ಶ್ವಾಸಕೋಶದ ಕಾಯಿಲೆ ಆಲ್ಕೋಹಾಲ್ ರಹಿತ ಕೊಬ್ಬಿನ ಪಿತ್ತಜನಕಾಂಗದ ಕಾಯಿಲೆ ಮತ್ತು ರಕ್ತಹೀನತೆಯ (19-29 ವರ್ಷ ವಯಸ್ಸಿನವರಿಗೆ) ಆರೋಗ್ಯ ತಪಾಸಣೆಯನ್ನು ಆಯುಷ್ಮಾನ್ ಆರೋಗ್ಯ ಕೇಂದ್ರಗಳಲ್ಲಿ ಉಚಿತವಾಗಿ ನಡೆಸಲಾಗುತ್ತಿದೆ ಮತ್ತು ರೋಗನಿರ್ಣಯದ ನಂತರ ಉಚಿತವಾಗಿ ಶಿಷ್ಟಾಚಾರದ ಔಷಧಿಗಳನ್ನು ಒದಗಿಸಲಾಗುತ್ತಿದೆ. |
| (ಆ) | ರಾಜ್ಯದಲ್ಲಿ ಮನೆಬಾಗಿಲಿಗೆ ಸೇವೆ ಹಾಗೂ ಉಚಿತ ಔಷಧ ಒದಗಿಸುವ 'ಗೃಹ ಆರೋಗ್ಯ' ಯೋಜನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಈ ಸಿಬ್ಬಂದಿಗಳು ಹೇಗೆ ಕಾರ್ಯನಿರ್ವಹಿಸುತ್ತಿದ್ದಾರೆ ಹಾಗೂ ಈ ಯೋಜನೆಗೆ ಎಷ್ಟು ಮೊತ್ತದ ಔಷಧಿ ಕಿಟ್‌ಗಳನ್ನು ಖರೀದಿ ಮಾಡಲಾಗಿದೆ; | ರಾಜ್ಯದಲ್ಲಿ ಮನೆಬಾಗಿಲಿಗೆ ಸೇವೆ ಹಾಗೂ ಉಚಿತ ಔಷಧ ಒದಗಿಸುವ 'ಗೃಹ ಆರೋಗ್ಯ' ಯೋಜನೆಯಲ್ಲಿ ಒಟ್ಟು 37,972 ಆಶಾ ಕಾರ್ಯಕರ್ತೆಯರು, 5738 ಸಮುದಾಯ ಆರೋಗ್ಯ ಅಧಿಕಾರಿಗಳು ಮತ್ತು 5,972 ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದಾರೆ. |

| | | |
|---|---|---|
| | | ಆರೋಗ್ಯ ಸಿಬ್ಬಂದಿಗಳ ಪಾತ್ರ:<br><br>• ಆಶಾಕಾರ್ಯಕರ್ತೆಯರು: ಮನೆ-ಮನೆಗೆ ಭೇಟಿ ನೀಡಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಮತ್ತು ಜಾಗೃತಿ ಮೂಡಿಸಿ, ಆರೋಗ್ಯ ತಪಾಸಣೆಗಾಗಿ ಆಯುಷ್ಮಾನ್ ಆರೋಗ್ಯ ಮಂದಿರಕ್ಕೆ ಕಳುಹಿಸುವುದು.<br>• CHO ಗಳು/ PHCO ಗಳು: ಆಯುಷ್ಮಾನ್ ಆರೋಗ್ಯ ಮಂದಿರಗಳಲ್ಲಿ (AAM) ಆರೋಗ್ಯ ತಪಾಸಣೆ ನಡೆಸಿ, NCD ಪೋರ್ಟಲ್‌ಗೆ ಡೇಟಾವನ್ನು ನಮೂದಿಸುತ್ತಾರೆ. ಆರೋಗ್ಯ ತಪಾಸಣೆ, ನಿರ್ವಹಣೆ ಮತ್ತು ಹೆಚ್ಚಿನ ಚಿಕಿತ್ಸೆಗಾಗಿ ಮೇಲ್ದರ್ಜೆ ಆಸ್ಪತ್ರೆಗಳಿಗೆ ಕಳುಹಿಸುವುದು.<br>• ವೈದ್ಯಾಧಿಕಾರಿಗಳು: ರೋಗನಿರ್ಣಯ, ಚಿಕಿತ್ಸೆ ಮತ್ತು ದೀರ್ಘಕಾಲೀನ ನಿರ್ವಹಣೆಯನ್ನು ಸೇವೆಗಳನ್ನು ಒದಗಿಸಲಾಗುವುದು.<br><br>2024-25ನೇ ಸಾಲಿನಲ್ಲಿ ಗೃಹ ಆರೋಗ್ಯ ಯೋಜನೆಯ ಅಡಿಯಲ್ಲಿ ರೂ.64.93 ಕೋಟಿಗಳ ಅನುದಾನದಲ್ಲಿ ಎನ್.ಸಿ.ಡಿ ಶಿಷ್ಟಾಚಾರದ ಔಷಧಿಗಳನ್ನು ಈಗಾಗಲೇ ಖರೀದಿಸಿ ಯೋಜನೆಗೆ ಬಳಸಲಾಗುತ್ತಿದೆ.<br><br>2025-26ನೇ ಸಾಲಿನಲ್ಲಿ ಗೃಹಆರೋಗ್ಯ ಯೋಜನೆಯ ಅಡಿಯಲ್ಲಿ ಎನ್.ಸಿ.ಡಿ ಶಿಷ್ಟಾಚಾರದ ಔಷಧಿಗಳನ್ನು ಖರೀದಿಸಲು ರೂ.115.08 ಕೋಟಿಗಳ ಅನುದಾನ ಬಿಡುಗಡೆಯಾಗಿದೆ. ಅವಶ್ಯಕ ಔಷಧಿಗಳ ಖರೀದಿ ಪ್ರಕ್ರಿಯೆ ಕೈಗೊಳ್ಳಲಾಗುತ್ತಿದೆ. |
| (ಇ) | ರಾಜ್ಯದಲ್ಲಿ ಮನೆಬಾಗಿಲಿಗೆ ಸೇವೆ ಹಾಗೂ ಉಚಿತ ಔಷಧ ಒದಗಿಸುವ 'ಗೃಹ ಆರೋಗ್ಯ' ಯೋಜನೆಯು ಪ್ರಸ್ತುತ ಎಷ್ಟು ಜಿಲ್ಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿದೆ ? | ರಾಜ್ಯದಲ್ಲಿ ಮನೆಬಾಗಿಲಿಗೆ ಸೇವೆ ಹಾಗೂ ಉಚಿತ ಔಷಧ ಒದಗಿಸುವ 'ಗೃಹಆರೋಗ್ಯ' ಯೋಜನೆಯು ಪ್ರಸ್ತುತ 31 ಜಿಲ್ಲೆಗಳಲ್ಲಿ ಚಾಲ್ತಿಯಲ್ಲಿದೆ. |

ಆಕುಕ 53 ಎಸ್‌ಟಿಕ್ಯೂ 2025

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು